ಆ) ರೂ. 63.00 ಲಕ್ಷಗಳು.

ಇ) ಯೋಜನೆಯ ಸರ್ವೆ ಕಾರ್ಯ ಮಾತ್ರ ಪೂರ್ಣಗೊಂಡಿರುವುದರಿಂದ ಯಾವುದೇ ಕಾರ್ಯಕ್ರಮವನ್ನು ರೂಪಿಸಿಕೊಂಡಿರುವುದಿಲ್ಲ.

47 (46) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಸಂತೇಮರಳ್ಳಿ ವಿಧಾನಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶಾಲಾ ಕೊಠಡಿಗಳ ಹಾಗೂ ಪೀಠೋಪಕರಣಗಳ ತೀವ್ರಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದು ಕೊಂಡಿರುವ ಕ್ರಮವೇನು?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಸಂತೇಮರಹಳ್ಳಿ ಕ್ಷೇತ್ರದ 8 ಪ್ರೌಢಶಾಲೆಗಳಲ್ಲಿ ಹಾಗೂ 4 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ನಬಾರ್ಡ್‌ನ ಆರ್‌ಐಡಿಎಫ್–10 ಯೋಜನೆಯಡಿಯಲ್ಲಿ ಮಂಜೂರಾದ 6 ಪ್ರೌಢಶಾಲೆಗಳಿಗೆ ಮಂಜೂರಾಗಿರುವ ಎಲ್ಲಾ 11 ಕೊಠಡಿಗಳ ನಿರ್ಮಾಣವನ್ನು ಪೂರ್ಯಿಸಲು ಕ್ರಮ ಕೈ ಗೊಳ್ಳಲಾಗುತ್ತಿದೆ. ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸದಂತೆ ಆರ್.ಐ.ಡಿ.ಎಫ್.–11ರಡಿಯಲ್ಲಿ ಎರಡು ಪದವಿಪೂರ್ವ ಕಾಲೇಜುಗಳಿಗೆ 6 ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಸದರಿ ಕ್ಷೇತ್ರದ ಪದವಿ ಪೂರ್ವ ಕಾಲೇಜುಗಳಿಗೆ ಪೀಠೋಪಕರಣಗಳ ಖರೀದಿಗಾಗಿ 2005–06ನೇ ಸಾಲಿನಲ್ಲಿ ರೂ. 70,000 ಬಿಡುಗಡೆ ಮಾಡಿದೆ. ಉಳಿದ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಸೌಲಭ್ಯ ಕಲ್ಪಿಸಲು ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಲಾಗುತ್ತದೆ.

48(47) ಶ್ರೀ ಆರ್. ಧ್ರುವನಾರಾಯಣ್ (ಸಂತೇಮರಳ್ಳಿ) : ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಚಾಮರಾಜನಗರ ತಾಲ್ಲೂಕು ಹೊಂಗನೂರು ಏತ ನೀರಾವರಿ ಯೋಜನೆ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು) :

ಅ) ಪ್ರಗತಿ ಕುಂಠಿತಗೊಂಡಿದೆ.

ಆ) ಕಾಮಗಾರಿಯನ್ನು 3/2007ರೊಳಗೆ ಪೂರ್ಣಗೊಳಿಸಲು ಕಾರ್ಯಕ್ರಮ ರೂಪಿಸಲಾಗಿದೆ.